# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 2642 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಂ.ರಮೇಶ್ ಗೌಡ |
| ಉತ್ತರಿಸುವ ದಿನಾಂಕ | : | 25.03.2022 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆಯ ವತಿಯಿಂದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು; | ಇ-ಆಡಳಿತ ಇಲಾಖೆಯು ಅಭಿವೃದ್ಧಿಪಡಿಸಿರುವ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ (SSP) 2021-22ನೇ ಸಾಲಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ದತ್ತಾಂಶ, ದಾಖಲಾತಿ ವಿವರ, ಕೌನ್ಸಲಿಂಗ್ ವಿವರ ಹಾಗೂ ಶುಲ್ಕದ ವಿವರಗಳನ್ನು ಕಾಲೇಜು/ವಿಶ್ವವಿದ್ಯಾಲಯಗಳು ಸರಿಯಾದ ಸಮಯಕ್ಕೆ ಎಸ್.ಎಸ್.ಪಿ ಪೋರ್ಟಲ್‌ನಲ್ಲಿ ಮಾಹಿತಿಯನ್ನು Update ಮಾಡದೇ ಇರುವುದರಿಂದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಶುಲ್ಕ ಪಾವತಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲು ಸಾಧ್ಯವಾಗದ ಕಾರಣ ವಿದ್ಯಾರ್ಥಿವೇತನ ಮಂಜೂರು ಮಾಡಲು ವಿಳಂಭವಾಗಿರುತ್ತದೆ. ಮುಂದುವರೆದು, ಇ-ಆಡಳಿತ ಇಲಾಖೆಯು SSP ತಂತ್ರಾಂಶದಲ್ಲಿ ವಿದ್ಯಾರ್ಥಿವೇತನ ಪಾವತಿಸಲು ಅವಕಾಶ ಕಲ್ಪಿಸಿದ ನಂತರ ಅರ್ಹ ವಿದ್ಯಾರ್ಥಿಗಳ ಆಧಾರ್ ಲಿಂಕ್ ಬ್ಯಾಂಕ್ ಖಾತೆಗೆ DBT ಮೂಲಕ ಪಾವತಿಸಲಾಗುವುದು. |
| ಆ) | ಇದಕ್ಕಾಗಿ ಅಭಿವೃದ್ಧಿಪಡಿಸಲಾದ ತಂತ್ರಾಂಶವು ವಿದ್ಯಾರ್ಥಿಗಳಿಗೆ/ಪಾಲಕರಿಗೆ ಮಾಹಿತಿಗೆ ಲಭ್ಯವಿರದೆ ಗೌಪ್ಯವಾಗಿರುವುದರಿಂದ, ಬಹಳಷ್ಟು ವಿದ್ಯಾರ್ಥಿಗಳು ಸಂಕಷ್ಟಕ್ಕೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಈ ಲೋಪದೋಷಗಳನ್ನು ಸರಿಪಡಿಸಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಇದರ ಪ್ರಯೋಜನವು ವಿದ್ಯಾರ್ಥಿಗಳಿಗೆ ಲಭ್ಯವಾಗುವಂತೆ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು? | 2021-22ನೇ ಸಾಲಿನಲ್ಲಿ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಶೀಘ್ರವಾಗಿ ತಲುಪಿಸುವ ಸಲುವಾಗಿ **"ವಿದ್ಯಾರ್ಥಿವೇತನ ಅಭಿಯಾನ"** ಕಾರ್ಯಕ್ರಮವನ್ನು ಕೈಗೊಳ್ಳಲು ಇಲಾಖೆಯ ರಾಜ್ಯಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ವಿದ್ಯಾರ್ಥಿವೇತನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಕುರಿತಂತೆ ಇಲಾಖಾವತಿಯಿಂದ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವ್ಯಾಪಕ ಪ್ರಚಾರಕ್ಕಾಗಿ |

| | | |
|---|---|---|
| | | ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆಯನ್ನು ನೀಡಿದ್ದು, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಯ ಬಗ್ಗೆಯು ಕಾರ್ಯಗಾರಗಳನ್ನು ನಡೆಸಲಾಗಿರುತ್ತದೆ. ಎಲ್ಲಾ ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಆಯಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳು/ಕಾಲೇಜುಗಳ ಮುಖ್ಯಸ್ಥರಿಗೆ ತಿಳಿಸಿರುತ್ತಾರೆ. ಮುಂದುವರೆದು, ರಾಜ್ಯಮಟ್ಟದಲ್ಲಿ ನಡೆಯುವ ಸಭೆಗಳಲ್ಲಿ ಈ ಬಗ್ಗೆ ವ್ಯಾಪಕ ಪ್ರಚಾರ ಮಾಡುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. |

**ಸಕಇ 225 ಎಸ್‌ಟಿಪಿ 2022**

(ಬಿ. ಶ್ರೀರಾಮುಲು )
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು